ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಹಾಸನ ಜಿಲ್ಲೆಯಲ್ಲಿರುವ ಅಂಗನವಾಡಿಗಳ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1347 (1588) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿರುವ ಅಂಗನವಾಡಿಗಳ ಸಂಖ್ಯೆ ಮತ್ತು ಮಿನಿ ಅಂಗನವಾಡಿಗಳ ಸಂಖ್ಯೆ ಎಷ್ಟು ; ಇಲ್ಲಿ ದಾಖಲಾಗಿರುವ ಮಕ್ಕಳ ಸಂಖ್ಯೆಯೆಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ 5 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಮಂಜೂರಾದ ಅಂಗನವಾಡಿ ಮತ್ತು ಮಿನಿ ಅಂಗನವಾಡಿ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಯಾವ ಯಾವ ಅಂಗನವಾಡಿ ಮತ್ತು ಮಿನಿ ಅಂಗನವಾಡಿಗಳು ಸ್ವಂತ ಕಟ್ಟಡ, ಬಾಡಿಗೆ ಕಟ್ಟಡ ಮತ್ತು ಸರ್ಕಾರಿ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಈ ಕಟ್ಟಡಗಳು ಸುಸ್ಥಿತಿಯಲ್ಲಿವೆಯೇ ; ಅಂಗನವಾಡಿವಾರು ಪೂರ್ಣ ವಿವರ ಒದಗಿಸುವುದು ;

(ಈ) ಇಲಾಖೆವತಿಯಿಂದ ಹಮ್ಮಿಕೊಳ್ಳಲಾಗಿರುವ ವಿವಿಧ ಯೋಜನೆಗಳು ಯಾವುವು ; ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಎಲ್ಲಾ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ ? (ಫಲಾನುಭವಿಗಳ ಪಟ್ಟಿ ಸಹಿತ ವಿವರ ಒದಗಿಸುವುದು)